**National**
**Kannada**
**22.02.2026 7.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾರತದ ಘೋಷಣೆಗೆ ೮೯ ದೇಶಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ಅನುಮೋದನೆ

೨. ಉತ್ತರ ಪ್ರದೇಶದ ಮೀರತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಂದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ

೩. ಕೃತಕ ಬುದ್ಧಿಮತ್ತೆ, ಅಂಗಾಂಗ ದಾನ ಸೇರಿದಂತೆ ಹಲವು ವಿಷಯಗಳ ಬಗ್ಗೆ ಮನ್ ಕಿ ಬಾತ್ ನಲ್ಲಿ ಪ್ರಧಾನಮಂತ್ರಿ ಪ್ರಸ್ತಾಪ: ಕರ್ನಾಟಕದ ಬೆಳೆಗಳ ಬಗ್ಗೆಯೂ ಉಲ್ಲೇಖ

೪. ಅಹಮದಾಬಾದ್ ನಲ್ಲಿ ಭಾರತ - ದಕ್ಷಿಣ ಆಫ್ರಿಕಾ ನಡುವೆ ಟಿ-೨೦ ವಿಶ್ವ ಕಪ್ ಕ್ರಿಕೆಟ್ ಪಂದ್ಯ ಪ್ರಗತಿಯಲ್ಲಿ: ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ತಂಡ ಬ್ಯಾಟಿಂಗ್ ಆಯ್ಕೆ

**<><><><>**

ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ರ ಭಾರತದ ಘೋಷಣೆಗೆ ೮೯ ದೇಶಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ಅನುಮೋದನೆ ನೀಡಿವೆ. ಇದು ಆರ್ಥಿಕ ಬೆಳವಣಿಗೆ ಮತ್ತು ಸಾಮಾಜಿಕ ಒಳಿತಿಗಾಗಿ ಕೃತಕ ಬುದ್ಧಿಮತ್ತೆ - ◌ಂI ಬಳಸಿಕೊಳ್ಳುವ ಬಗ್ಗೆ ವಿಶಾಲ ಜಾಗತಿಕ ಒಮ್ಮತದ ಪ್ರತಿಬಿಂಬವಾಗಿದೆ. ನವದೆಹಲಿಯಲ್ಲಿ ಶುಕ್ರವಾರ ಮುಕ್ತಾಯಗೊಂಡ ಶೃಂಗಸಭೆಯಲ್ಲಿ ಜಗತ್ತಿನಾದ್ಯಂತದ ಪ್ರತಿನಿಧಿಗಳು ಪಾಲ್ಗೊಂಡಿದ್ದು, ಆಸ್ಟ್ರೇಲಿಯಾ, ಫ್ರಾನ್ಸ್, ಜರ್ಮನಿ, ಸ್ವಿಟ್ಜರ್ಲೆಂಡ್, ಬ್ರೆಜಿಲ್, ಯುಎಇ, ಕೆನಡಾ, ಇಸ್ರೇಲ್, ಯುನೈಟೆಡ್ ಕಿಂಗ್‌ಡಮ್, ಚೀನಾ, ಜಪಾನ್, ಅಮೆರಿಕ, ರಷ್ಯಾ, ಸೌದಿ ಅರೇಬಿಯಾ, ಸಿಂಗಾಪುರ ಮತ್ತು ಬಾಂಗ್ಲಾದೇಶ ಪ್ರಮುಖವಾಗಿವೆ. "ಸರ್ವಜನ ಹಿತಾಯ, ಸರ್ವಜನ ಸುಖಾಯ" ಎಂಬ ತತ್ವದಿಂದ ಮಾರ್ಗದರ್ಶಿಸಲ್ಪಟ್ಟ ಈ ಘೋಷಣೆಯು ಎಲ್ಲಾ ಜನರಿಗೂ ಕೃತಕ ಬುದ್ಧಿಮತ್ತೆಯ ಅನುಕೂಲಗಳು ಸಮಾನವಾಗಿ ಸಿಗಬೇಕು ಎಂದು ಒತ್ತಿಹೇಳುತ್ತದೆ.

**<><><><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಉತ್ತರ ಪ್ರದೇಶದ ಮೀರತ್‌ನಲ್ಲಿರುವ ಶತಾಬ್ದಿ ನಗರ ನಮೋ ಭಾರತ್ ನಿಲ್ದಾಣದಲ್ಲಿ ಮೀರತ್ ಮೆಟ್ರೋ ಮತ್ತು ನಮೋ ಭಾರತ್ ರೈಲಿಗೆ ಹಸಿರು ನಿಶಾನೆ ತೋರಿದರು ಮತ್ತು ಮೀರತ್ ದಕ್ಷಿಣ ನಿಲ್ದಾಣದವರೆಗೆ ಮೆಟ್ರೋ ಪ್ರಯಾಣ ಕೈಗೊಂಡರು. ಇದೇ ವೇಳೆ ಅವರು, ೮೨ ಕಿಲೋಮೀಟರ್ ಉದ್ದದ ದೆಹಲಿ-ಮೀರತ್ ನಮೋ ಭಾರತ್ ಕಾರಿಡಾರ್ ಅನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಭಾರತದ ಮೊದಲ ನಮೋ ಭಾರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ - ಖಖಖಿSನ ಉಳಿದ ವಿಭಾಗಗಳನ್ನು ಉದ್ಘಾಟಿಸಿದರು.

ಭಾರತದ ಮೊದಲ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆಯನ್ನು ಗಂಟೆಗೆ ೧೮೦ ಕಿಲೋಮೀಟರ್ ವೇಗದೊಂದಿಗೆ ವಿನ್ಯಾಸಗೊಳಿಸಲಾಗಿದೆ. ಮೀರತ್ ದಕ್ಷಿಣ ಮತ್ತು ಮೋದಿಪುರಂ ನಡುವಿನ ಮೀರತ್ ಮೆಟ್ರೋ ಸೇವೆಗಳಿಗೆ ಪ್ರಧಾನಮಂತ್ರಿ ಚಾಲನೆ ನೀಡಿದರು. ಇದು ನಮೋ ಭಾರತ್ ನಂತೆಯೇ ರೈಲ್ವೆ ಮೂಲಸೌಕರ್ಯ ಹೊಂದಿದ್ದು, ದೇಶದಲ್ಲಿ ಇದೇ ಮೊದಲ ಬಾರಿಗೆ ಇಂತಹ ವ್ಯವಸ್ಥೆ ಮಾಡಲಾಗಿದೆ. ನಂತರ ಪ್ರಧಾನಮಂತ್ರಿಗಳು ಮೀರತ್‌ನಲ್ಲಿ ಸುಮಾರು ೧೨ ಸಾವಿರದ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ರಾಷ್ಟ್ರಕ್ಕೆ ಸಮರ್ಪಿಸಿದರು. ಬಳಿಕ ಮಾತನಾಡಿದ ಅವರು, ಇಂದು ಚಾಲನೆ ದೊರೆತ ಯೋಜನೆಗಳು ವಿಕಸಿತ ಉತ್ತರ ಪ್ರದೇಶ ಮತ್ತು ವಿಕಸಿತ ಭಾರತಕ್ಕೆ ಒತ್ತು ನೀಡಲಿವೆ ಎಂದು ತಿಳಿಸುತ್ತಾ, ಎಲ್ಲಾ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತಮ್ಮ ಸರ್ಕಾರ ಬದ್ಧ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಇಂದು ಉದ್ಘಾಟಿಸಲಾದ ಯೋಜನೆಗಳಿಂದ ರಾಜ್ಯದ ಜನರಿಗೆ ಹೆಚ್ಚಿನ ಅನುಕೂಲವಾಗಲಿವೆ ಎಂದು ಹೇಳಿದರು.

**<><><><>**

ಭಾರತೀಯ ಚುನಾವಣಾ ಆಯೋಗವು ನವದೆಹಲಿಯಲ್ಲಿ ಮಂಗಳವಾರ ಚುನಾವಣಾ ಆಯುಕ್ತರು ಮತ್ತು ರಾಜ್ಯ ಚುನಾವಣಾ ಆಯುಕ್ತರ ರಾಷ್ಟ್ರೀಯ ದುಂಡು ಮೇಜಿನ ಸಮ್ಮೇಳನವನ್ನು ಆಯೋಜಿಸಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳು ಹಾಗೂ ರಾಜ್ಯ ಚುನಾವಣಾ ಆಯುಕ್ತರು ತಮ್ಮ ತಮ್ಮ ಕಾನೂನು ಮತ್ತು ತಾಂತ್ರಿಕ ತಜ್ಞರೊಂದಿಗೆ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಚುನಾವಣಾ ಕ್ರಿಯೆಗಳನ್ನು ಬಲಪಡಿಸುವ ಬಗ್ಗೆ ಮತ್ತು ತಂತ್ರಜ್ಞಾನ, ಇವಿಎಂಗಳು ಮತ್ತು ಮತದಾರರ ಪಟ್ಟಿಗಳ ಹಂಚಿಕೆಯ ಬಗ್ಗೆ ಚರ್ಚೆ ನಡೆಯಲಿದೆ ಎಂದು ಆಯೋಗ ತಿಳಿಸಿದೆ. ಆಯೋಗದ ಹಿರಿಯ ಅಧಿಕಾರಿಗಳು ಇಸಿಐಎನ್‌ಇಟಿ ವೇದಿಕೆ ಸೇರಿದಂತೆ ಪ್ರಮುಖ ತಾಂತ್ರಿಕ ಮತ್ತು ಕಾರ್ಯಾಚರಣೆಯ ಉಪಕ್ರಮಗಳ ಕುರಿತು

ಪ್ರಸ್ತುತಿಗಳನ್ನು ನೀಡಲಿದ್ದಾರೆ. ೨೭ ವರ್ಷಗಳ ನಂತರ ದುಂಡು ಮೇಜಿನ ಸಮ್ಮೇಳನ ಆಯೋಜನೆಯಾಗಿದ್ದು, ಈ ಹಿಂದೆ ೧೯೯೯ ರಲ್ಲಿ ಇಂತಹ ಸಮ್ಮೇಳನ ನಡೆದಿತ್ತು.

<><><>

ಜನರ ಕಲ್ಯಾಣಕ್ಕೆ ಮತ್ತು ಉತ್ತಮ ಆಡಳಿತ ಒದಗಿಸಲು ಕೇಂದ್ರ ಸರ್ಕಾರ ಬದ್ಧ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಆಂಧ್ರಪ್ರದೇಶದ ತಿರುಪತಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಸಮಾಜದ ಎಲ್ಲಾ ವರ್ಗಗಳಿಗೆ ಕಲ್ಯಾಣ ಕ್ರಮಗಳು ಮತ್ತು ಪಾರದರ್ಶಕ ಆಡಳಿತವನ್ನು ಖಚಿತಪಡಿಸಿಕೊಳ್ಳುವತ್ತ ಸರ್ಕಾರ ಗಮನಹರಿಸಿದೆ ಎಂದು ಪುನರುಚ್ಚರಿಸಿದರು. ಇದಕ್ಕೂ ಮುನ್ನ ಕೇಂದ್ರ ಸಚಿವರು ತಿರುಮಲದ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು. ದೇಶದ ಜನರ ಆರೋಗ್ಯ, ಸಂತೋಷ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಿದ್ದಾಗಿ ಅವರು ಹೇಳಿದ್ದಾರೆ. ನಂತರ, ಆಂಧ್ರಪ್ರದೇಶದ ಕೃಷಿ ಸಚಿವ ಕೆ. ಅಚ್ಚನ್ನಾಯ್ದು ತಿರುಮಲದಲ್ಲಿ ಚೌಹಾಣ್ ಅವರನ್ನು ಭೇಟಿಯಾಗಿ ರಾಜ್ಯದ ಕೃಷಿ ಸುಧಾರಣೆ ಸಂಬಂಧ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಿದರು.

<><><>

ಅಂಚೆ ವಲಯದಲ್ಲಿ ಸಹಕಾರದ ಕುರಿತು ಭಾರತ ಮತ್ತು ಬ್ರೆಜಿಲ್ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ. ಇದು ಅಂಚೆ ಸೇವೆಗಳಲ್ಲಿ ದ್ವಿಪಕ್ಷೀಯ ಸಹಯೋಗವನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಮತ್ತು ಬ್ರೆಜಿಲ್ ಸಂವಹನ ಸಚಿವ ಫ್ರೆಡೆರಿಕೊ ಡಿ ಸಿಕ್ವೇರಾ ಫಿಲ್ಹೋ ಅವರು ಈ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ. ಈ ಒಪ್ಪಂದವನ್ನು ಎರಡೂ ದೇಶಗಳ ಕಾನೂನುಗಳು ಮತ್ತು ನಿಯಮಗಳಿಗೆ ಅನುಸಾರವಾಗಿ ಐದು ವರ್ಷಗಳ ಆರಂಭಿಕ ಅವಧಿಗೆ ಜಾರಿಗೆ ತರಲಾಗುವುದು ಎಂದು ಸಚಿವಾಲಯ ಹೇಳಿದೆ. ಅಂಚೆ ವ್ಯವಸ್ಥೆ ಆಧುನೀಕರಿಸುವಲ್ಲಿ ಹಾಗೂ ಆರ್ಥಿಕ ಸೇರ್ಪಡೆ ಮತ್ತು ಕೊನೆಯ ಹಂತದ ಸೇವಾ ವಿತರಣೆಯಾಗಿ ತಮ್ಮ ಜಾಲವನ್ನು ಬಳಸಿಕೊಳ್ಳುವಲ್ಲಿ ಭಾರತ ಮತ್ತು ಬ್ರೆಜಿಲ್‌ನ ಹಂಚಿತ ಬದ್ಧತೆಯನ್ನು ಈ ಒಪ್ಪಂದ ಪ್ರತಿಬಿಂಬಿಸಿದೆ.

<><><>

ಭವಿಷ್ಯದಲ್ಲಿ ಕೃತಕ ಬುದ್ಧಿಮತ್ತೆ - ಎಐನ ಶಕ್ತಿಯನ್ನು ಜಗತ್ತು ಹೇಗೆ ಬಳಸಿಕೊಳ್ಳಲಿದೆ ಎಂಬ ಪಥವನ್ನು ನೀಡುವಲ್ಲಿ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯು ಮಹತ್ವದ ತಿರುವು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಆಕಾಶವಾಣಿಯ ಇಂದಿನ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಅವರು, ನವದೆಹಲಿಯ ಭಾರತ ಮಂಟಪದಲ್ಲಿ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಹಲವು ದೇಶಗಳ ನಾಯಕರು, ಉದ್ಯಮ ಮುಖಂಡರು, ನಾವೀನ್ಯಕಾರರು ಮತ್ತು ನವೋದ್ಯಮಿಗಳು ಒಗ್ಗೂಡಿದ್ದಾರೆ ಎಂದು ಹೇಳುತ್ತಾ, ವಿಶ್ವ ನಾಯಕರು ಮತ್ತು ತಂತ್ರಜ್ಞಾನ ವಲಯ ಸಂಸ್ಥೆಗಳ

ಮುಖ್ಯಕಾರ್ಯನಿರ್ವಹಣಾಧಿಕಾರಿಗಳನ್ನು ಭೇಟಿ ಮಾಡುವ ಅವಕಾಶ ದೊರೆತಿದೆ ಎಂದು ಹೇಳಿದರು. ಅಮುಲ್ ಮಳಿಗೆ ಮತ್ತು ಸುಶ್ರುತ ಸಂಹಿತಾ ಪ್ರದರ್ಶನವನ್ನು ವಿಶೇಷವಾಗಿ ಉಲ್ಲೇಖಿಸಿದ ಅವರು, ಪ್ರಾಣಿಗಳ ಚಿಕಿತ್ಸೆಯಲ್ಲಿ ಎಐ ಹೇಗೆ ಪೂರಕವಾಗಿದೆ ಮತ್ತು ದಿನದ ೨೪ ಗಂಟೆಯೂ ಎಐ ನೆರವಿನೊಂದಿಗೆ ರೈತರು ತಮ್ಮ ಹೈನುಗಾರಿಕೆ ಮತ್ತು ಪ್ರಾಣಿಗಳನ್ನು ನಿಗಾವಹಿಸುವರು ಎಂಬುದನ್ನು ಈ ಪ್ರದರ್ಶನ ಇದು ವಿವರಿಸಿದೆ ಎಂದರು. ಸುಶ್ರುತ ಸಂಹಿತಾ ಪ್ರದರ್ಶನದ ಬಗ್ಗೆ ಪ್ರಸ್ತಾಪಿಸುತ್ತಾ ಅವರು, ಕೃತಕ ಬುದ್ಧಿಮತ್ತೆಯ ಸಹಾಯದಿಂದ ಭಾರತವು ಪ್ರಾಚೀನ ಗ್ರಂಥಗಳು, ಜ್ಞಾನ ಮತ್ತು ಹಸ್ತಪ್ರತಿಗಳನ್ನು ಹೇಗೆ ಸಂರಕ್ಷಿಸುತ್ತಿದೆ ಎಂಬುದನ್ನು ನೋಡಿ ಪ್ರಪಂಚದಾದ್ಯಂತದ ನಾಯಕರು ಆಶ್ಚರ್ಯಚಕಿತರಾಗಿದ್ದಾರೆ ಎಂದು ಹೇಳಿದರು. ಮನ್ ಕಿ ಬಾತ್‌ನ ಈ ಸಂಚಿಕೆಯಲ್ಲಿ, ಪ್ರಧಾನಮಂತ್ರಿಗಳು ಕೇರಳದ ಪುಟ್ಟ ಹುಡುಗಿ ಆಲಿನ್ ಶೆರಿನ್ ಅಬ್ರಹಾಂ ಕೇವಲ ಹತ್ತು ತಿಂಗಳ ವಯಸ್ಸಿನಲ್ಲಿ ಪ್ರಾಣ ಕಳೆದುಕೊಂಡಾಗ ಅವರ ತಂದೆ ಅರುಣ್ ಅಬ್ರಹಾಂ ಮತ್ತು ತಾಯಿ ಶೆರಿನ್ ಅವರು ಆಲಿನ್ ಅಂಗಗಳನ್ನು ದಾನ ಮಾಡುವ ನಿರ್ಧಾರ ಕೈಗೊಂಡರು. ಈ ನಿರ್ಧಾರವು ಅವರ ಚಿಂತನೆಯ ವಿಸ್ತಾರ ಮತ್ತು ವ್ಯಕ್ತಿತ್ವದ ಪರಿಮಾಣವನ್ನು ತಿಳಿಸುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಭಾರತದಲ್ಲಿ ಅಂಗಾಂಗ ದಾನದ ಬಗ್ಗೆ ಜಾಗೃತಿ ಹೆಚ್ಚುತ್ತಿದ್ದು, ಇದು ದೇಶದಲ್ಲಿ ವೈದ್ಯಕೀಯ ಸಂಶೋಧನೆಯನ್ನು ಬಲಪಡಿಸುತ್ತಿದೆ ಎಂದು ಅವರು ಹೇಳಿದರು. ರಾಷ್ಟ್ರಪತಿ ಭವನದಲ್ಲಿ ನಾಳೆ ರಾಜಾಜಿ ಉತ್ಸವ ಆಚರಿಸುವ ಸಂದರ್ಭದಲ್ಲಿ, ರಾಷ್ಟ್ರಪತಿ ಭವನದ ಅಂಗಳದಲ್ಲಿರುವ ಬ್ರಿಟಿಷ್ ವಾಸ್ತುಶಿಲ್ಪಿ ಎಡ್ವಿನ್ ಲುಟ್ಯೆನ್ಸ್ ಅವರ ಪ್ರತಿಮೆಯ ಬದಲಿಗೆ ಸ್ವತಂತ್ರ ಭಾರತದ ಮೊದಲ ಭಾರತೀಯ ಗವರ್ನರ್ ಜನರಲ್ ಸಿ. ರಾಜಗೋಪಾಲಾಚಾರಿ ಅವರ ಪ್ರತಿಮೆಯನ್ನು ಸ್ಥಾಪಿಸಲಾಗುವುದು ಎಂದು ಪ್ರಧಾನಮಂತ್ರಿ ಹೇಳಿದರು. ಅಧಿಕಾರವನ್ನು ಒಂದು ಹುದ್ದೆಯಾಗಿ ನೋಡದೆ, ಸೇವೆಯ ರೂಪವೆಂದು ನೋಡಿದ ನಾಯಕರಲ್ಲಿ ಸಿ. ರಾಜಗೋಪಾಲಾಚಾರಿ ಒಬ್ಬರು ಎಂದು ಶ್ಲಾಘಿಸಿದ ಅವರು, ಸ್ವಾತಂತ್ರ್ಯಾ ನಂತರವೂ ಬ್ರಿಟಿಷ್ ಆಡಳಿತಗಾರರ ಪ್ರತಿಮೆಗಳನ್ನು ರಾಷ್ಟ್ರಪತಿ ಭವನದಲ್ಲಿ ಇರಿಸಲು ಅವಕಾಶ ನೀಡಲಾಗಿದ್ದು, ಭಾರತದ ಶ್ರೇಷ್ಠ ಪುತ್ರರ ಪ್ರತಿಮೆಗಳಿಗೆ ಸ್ಥಳ ನಿರಾಕರಿಸಲಾಗಿದೆ ಎಂಬುದು ದುರದೃಷ್ಟಕರ ಎಂದು ಬೇಸರ ವ್ಯಕ್ತಪಡಿಸಿದರು. ನಾಡಿದ್ದು ೨೪ ರಿಂದ ಮಾರ್ಚ್ ೧ ರವರೆಗೆ ರಾಜಾಜಿ ಉತ್ಸವದ ಅಂಗವಾಗಿ ಸಿ. ರಾಜಗೋಪಾಲಾಚಾರಿ ಅವರ ಬಗ್ಗೆ ಪ್ರದರ್ಶನ ನಡೆಯಲಿದೆ. ಕೃಷಿ ಉತ್ಪನ್ನಗಳು ಈಗ ವಿದೇಶಗಳಿಗೆ ಸುಲಭವಾಗಿ ತಲುಪುತ್ತಿವೆ ಎಂದು ಹರ್ಷ ವ್ಯಕ್ತಪಡಿಸಿದ ಅವರು, ಕರ್ನಾಟಕದ ನಂಜನಗೂಡಿನ ಬಾಳೆಹಣ್ಣುಗಳು, ಮೈಸೂರಿನ ವೀಳ್ಯದ ಎಲೆಗಳು ಮತ್ತು ಇಂಡಿ ನಿಂಬೆಹಣ್ಣುಗಳನ್ನು ಮಾಲ್ಡೀವ್ಸ್‌ಗೆ ರಫ್ತು ಮಾಡಲಾಗುತ್ತಿದೆ ಎಂದು ಹೇಳಿದರು. ಈ ಬೆಳೆಗಳು ಅವುಗಳ ರುಚಿ ಮತ್ತು ಗುಣಮಟ್ಟಕ್ಕೆ ಹೆಸರುವಾಸಿಯಾಗಿದ್ದು, ಜಿಐ ಟ್ಯಾಗ್ ಅನ್ನು ಸಹ ಪಡೆದಿವೆ. ಇದು ರಾಜ್ಯದ ರೈತರ ಕಠಿಣ

ಪರಿಶ್ರಮಕ್ಕೆ ಸಿಕ್ಕ ಜಾಗತಿಕ ಮನ್ನಣೆಯಾಗಿದೆ. ಇಂದಿನ ರೈತರು ಗುಣಮಟ್ಟ ಸಹಿತವಾಗಿ ಹೆಚ್ಚಿನ ಇಳುವರಿಗೆ ಆದ್ಯತೆ ನೀಡುತ್ತಿದ್ದಾರೆ ಎಂದು ಪ್ರಧಾನಮಂತ್ರಿ ಶ್ಲಾಘಿಸಿದರು.

<><><>

ಉಕ್ರೇನ್‌ನ ಲಿವಿವ್‌ನಲ್ಲಿ ಮಧ್ಯರಾತ್ರಿ ಸ್ಫೋಟಕ ಸಾಧನಗಳು ಸ್ಫೋಟಗೊಂಡ ಪರಿಣಾಮ ಒಬ್ಬ ಪೊಲೀಸ್ ಅಧಿಕಾರಿ ಸಾವನ್ನಪ್ಪಿದ್ದು, ೨೪ ಜನರು ಗಾಯಗೊಂಡಿದ್ದಾರೆ. ದುರ್ಘಟನೆಯ ಶಂಕಿತ ಸ್ಥಳಕ್ಕೆ ಪೊಲೀಸರು ಆಗಮಿಸಿದಾಗ ಮೊದಲ ಸ್ಫೋಟ ಸಂಭವಿಸಿದ್ದು, ಕೆಲವೇ ಕ್ಷಣಗಳಲ್ಲಿ ಮತ್ತೊಂದು ಬಾರಿ ಸ್ಫೋಟವಾಗಿದೆ. ಲಿವಿವ್‌ನ ಮೇಯರ್ ಆಂಡ್ರಿ ಸಡೋವಿ ಈ ದಾಳಿಗಳು ಭಯೋತ್ಪಾದಕ ಕೃತ್ಯ ಎಂದು ಕರೆದಿದ್ದಾರೆ. ಶಂಕಿತರನ್ನು ಬಂಧಿಸಲಾಗಿದೆ ಎಂದು ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

<><><>

ಟ್ಯಾಸ್ಮೇನಿಯಾದ ಹೋಬಾರ್ಟ್‌ನಲ್ಲಿಂದು ನಡೆದ ಅಂತಾರಾಷ್ಟ್ರೀಯ ಹಾಕಿ ಒಕ್ಕೂಟ - ಎಫ್ ಐ ಹೆಚ್ ಪುರುಷರ ಪ್ರೊ ಲೀಗ್‌ನ ಎರಡನೇ ಪಂದ್ಯದಲ್ಲಿ ಆತಿಥೇಯ ಆಸ್ಟ್ರೇಲಿಯಾ ವಿರುದ್ಧ ಪೆನಾಲ್ಟಿ ಶೂಟೌಟ್‌ನಲ್ಲಿ ಭಾರತದ ಪುರುಷರ ಹಾಕಿ ತಂಡ ೪-೫ ಅಂತರದಲ್ಲಿ ಸೋಲನುಭವಿಸಿತು.

<><><>

ಅಹಮದಾಬಾದ್ ನಲ್ಲಿ ನಡೆಯುತ್ತಿರುವ ಭಾರತ - ದಕ್ಷಿಣ ಆಫ್ರಿಕಾ ನಡುವಿನ ಟಿ-೨೦ ವಿಶ್ವ ಕಪ್ ಕ್ರಿಕೆಟ್ ಪಂದ್ಯದಲ್ಲಿ ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಶ್ರೀಲಂಕಾದಲ್ಲಿ ಇಂದು ನಡೆದ ಇಂಗ್ಲೆಂಡ್ - ಶ್ರೀಲಂಕಾ ನಡುವಿನ ಮತ್ತೊಂದು ಪಂದ್ಯದಲ್ಲಿ ಇಂಗ್ಲೆಂಡ್ ತಂಡ ೫೧ ರನ್ ಗಳ ಜಯ ಗಳಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ ತಂಡ ನಿಗದಿತ ೨೦ ಓವರ್ ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೬ ರನ್ ಗಳಿಸಿತು. ಗುರಿ ಬೆನ್ನತ್ತಿದ ಶ್ರೀಲಂಕಾ ತಂಡ ೧೬.೪ ಓವರ್ ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ಕೇವಲ ೯೫ ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು.

<><><>